354 ಶ್ರೀಮತಿ ಮಲ್ಲಿಕಾ ಪ್ರಸಾದ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜ್ಞಾನಪೀಠ ಪ್ರಶಸ್ತಿ ವಿಜೇತ ಡಾ: ಶಿವರಾಮ ಕಾರಂತರ ಬಾಲವನ ಪುತ್ತೂರು ಇದನ್ನು ಪ್ರವಾಸೋದ್ಯಮ ಕೇಂದ್ರವಾಗಿ ಬೆಳೆಸುವ ವಿಚಾರ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಹಾಗಿಲ್ಲದಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು;

ಈ) 2008–09ನೇ ಸಾಲಿನಲ್ಲಿ ಬಾಲವನ ಅಭಿವೃದ್ಧಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು;

ಉ) ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಬಾಲವನ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಪ್ರಸ್ತುತ ಇಲಾಖೆಯ ಮುಂದೆ ಈ ಯೋಜನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಬಾಲವನವು ಈ ಇಲಾಖೆಯ ವ್ಯಾಪ್ತಿಯಲ್ಲಿ ಬರದೆ ಇರುವುದರಿಂದ ಈ ವಿಚಾರವು ಪ್ರವಾಸೋದ್ಯಮ ಇಲಾಖೆಯ ಮುಂದೆ ಇರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

484 ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಅಬಕಾರಿ, ವಾರ್ತೆ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೂ ಇಂತಿಷ್ಟೇ ಮದ್ಯ ಮಾರಾಟವನ್ನು ಮಾಡಬೇಕೆಂದು ಅಬಕಾರಿ ಇಲಾಖೆಗೆ ಸರ್ಕಾರ ಆದೇಶಿಸಿದೆಯೇ;

ಆ) ಹಾಗಿದ್ದಲ್ಲಿ, ಈ ರೀತಿ ಆದೇಶ ಹೊರಡಿಸಲು ಇದ್ದ ಬಲವಾದ ಕಾರಣಗಳೇನು?

ಶ್ರೀ ಕಟ್ಟಾ ಸುಬ್ರಮಣ್ಯನಾಯ್ಡು (ಅಬಕಾರಿ, ವಾರ್ತಾ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ, ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) :

ಅ) ಜಿಲ್ಲೆಗಳಲ್ಲಿ ಹಿಂದೆ ಇದ್ದ ಬಳಕೆ ಪ್ರಮಾಣ, ಸನ್ನದುಗಳ ಸಂಖ್ಯೆ ಮತ್ತು ಮದ್ಯ ಬಳಕೆಗೆ ಇರುವ ಸಂಭಾವ್ಯ ಬೇಡಿಕೆ (potential) ಇವುಗಳನ್ನು ಆಧರಿಸಿ ಮದ್ಯದ ಬಳಕೆ ಗುರಿಯನ್ನು ನಿಗದಿಪಡಿಸಿದೆ. ಜಿಲ್ಲಾವಾರು ಮದ್ಯದ ಗುರಿಯನ್ನು ಗಣನೆಗೆ ತೆಗೆದುಕೊಂಡು ಜಿಲ್ಲೆಯಲ್ಲಿನ ತಾಲ್ಲೂಕಿನ/ವಲಯದ ಸಂಭಾವ್ಯ ಬೇಡಿಕೆಗನುಗುಣವಾಗಿ ತಾಲ್ಲೂಕು ಮಟ್ಟದ ಗುರಿಯನ್ನು ಮರು ವಿಂಗಡಿಸಿ ನೀಡಲಾಗಿದೆ.

ಆ) ಪ್ರತಿ ತಾಲ್ಲೂಕಿನಲ್ಲಿ ಅಕ್ರಮ ಮದ್ಯ ಚಟುವಟಿಕೆಯ ನಿಯಂತ್ರಣಕ್ಕೆ ಅನುಗುಣವಾಗಿ ಕ್ರಮಬದ್ಧ ಮದ್ಯ ಮಾರಾಟ ಅವಲಂಬಿಸುತ್ತದೆ. ಮದ್ಯ ಮಾರಾಟಕ್ಕೆ ಗುರಿ ನಿಗದಿಪಡಿಸಿರುವುದು ಮೂಲತಃ ಅಕ್ರಮ ಮದ್ಯ ಚಟುವಟಿಕೆಯನ್ನು ಅಳತೆ ಮಾಡುವುದು ಆಗಿರುತ್ತದೆ.

ಅಕ್ರಮ ಚಟುವಟಿಕೆಗಳು ಇಲ್ಲದಿದ್ದಂತಹ ಪ್ರದೇಶಗಳಲ್ಲಿ ನಿಗದಿಪಡಿಸಿದ ಮದ್ಯದ ಗುರಿ ಸಾಧಿಸದೇ ಇದ್ದರೂ ಯಾವುದೇ ಕ್ರಮ ಜರುಗಿಸುವುದಿಲ್ಲ.

604 ಶ್ರೀ ಪಾಟೀಲ್ ಬಿ.ಸಿ. : ಮಾನ್ಯ ಅಬಕಾರಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09 ಮತ್ತು 2009–10ನೇ ಸಾಲಿಗೆ ಸನ್ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮಗಳ ಜಾಹೀರಾತಿಗಾಗಿ ಕರ್ನಾಟಕದಾದ್ಯಂತ ಖರ್ಚು ಮಾಡಿದ ವೆಚ್ಚವೆಷ್ಟು (ವಿವರ ನೀಡುವುದು)?

ಶ್ರೀ ಕಟ್ಟಾ ಸುಬ್ರಮಣ್ಯನಾಯ್ಡು (ಅಬಕಾರಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) :

ಅ) ಸನ್ಮಾನ್ಯ ಮುಖ್ಯಮಂತ್ರಿಗಳು 2008–09 ಮತ್ತು 2009–10ನೇ ಸಾಲಿನಲ್ಲಿ ಭಾಗವಹಿಸಿದ ಸಾರ್ವಜನಿಕ ಕಾರ್ಯಕ್ರಮಗಳ ಜಾಹೀರಾತಿಗಾಗಿ ಉಂಟಾದ ಒಟ್ಟು ವೆಚ್ಚದ ವಿವರ ಈ ಕೆಳಕಂಡಂತಿದೆ: